		ತೊಗರಿ	38246	10414
		ಭತ್ತ	220	--
		ಜೋಳ	1210	--
		ಮೆ.ಜೋಳ	100	--
		ಸಜ್ಜೆ	1250	155
		ಅಲಸಂದಿ	258	--
		ಎಳ್ಳು	998	299
		ಸೂ.ಕಾಂತಿ	21	102
		ಗುರಳ್ಳು	200	929
		ಸೊಯಾಬೀನ್	300	--
		ಇತರೆ	90	--
		ಒಟ್ಟು	**63545**	**11899**

ಆ) ಅತಿವೃಷ್ಟಿಯಿಂದ ಹಾನಿ ಉಂಟಾದ ಬೆಳೆಗಳಿಗೆ ಸಿಆರ್‌ಎಫ್/ ಎನ್.ಸಿ.ಸಿಎಫ್ ಮಾರ್ಗಸೂಚಿ ಪ್ರಕಾರ ಚಿಂಚೋಳಿ ತಾಲ್ಲೂಕಿನಲ್ಲಿ ರೂ. 93.99 ಲಕ್ಷ ಹಾಗೂ ಸೇಡಂ ತಾಲ್ಲೂಕಿನಲ್ಲಿ ರೂ. 84.56 ಲಕ್ಷ ಪರಿಹಾರ ವಿತರಿಸಲಾಗಿದೆ. ಪರಿಹಾರ ಪಾವತಿಸುವುದು ಬಾಕಿ ಇರುವುದಿಲ್ಲ.

ಬರ ಪರಿಹಾರ ಕಾರ್ಯಗಳಿಗೆ ರೂ.394.91 ಕೋಟಿ ಬಿಡುಗಡೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿತ್ತು. ಕೇಂದ್ರ ಸರ್ಕಾರದ HLC ಕಮಿಟಿಯು ಪರಿಹಾರಕ್ಕೆ ರೂ. 116.49 ಕೋಟಿಗೆ ಅನುಮೋದನೆ ನೀಡಿದ್ದು, ಈ ಮೊತ್ತದಲ್ಲಿ ಸಿಆರ್‌ಎಫ್‌ನಲ್ಲಿ ಲಭ್ಯವಿರುವ ಮೊತ್ತ ರೂ. 107.75 ಕೋಟಿ ಹೊಂದಾಣಿಕೆ ಮಾಡಿಕೊಂಡು ರೂ. 8.74 ಕೋಟಿ ಮಾತ್ರ ಬಿಡುಗಡೆ ಮಾಡಿರುತ್ತದೆ. ಬರ ಪರಿಹಾರಕ್ಕೆ ಬಿಡುಗಡೆಯಾಗಿರುವ ಮೊತ್ತ ಕಡಿಮೆ ಇದ್ದುದ್ದರಿಂದ ಬೆಳೆ ಹಾನಿಗೆ ಪರಿಹಾರ ನೀಡಿರುವುದಿಲ್ಲ.

733 ಶ್ರೀ ರಮಾನಾಥ್ ರೈ. ಬಿ (ಬಂಟ್ವಾಳ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರಸ್ತುತ ವರ್ಷ ರಾಜ್ಯದಲ್ಲಿ ಹೊಸದಾಗಿ ತಾಲ್ಲೂಕು ಮಟ್ಟದಲ್ಲಿ ಮಿನಿ ವಿಧಾನಸೌಧಗಳನ್ನು ನಿರ್ಮಾಣ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ;

ಆ) ಹಾಗಿದ್ದಲ್ಲಿ, ಬಂಟ್ವಾಳ ತಾಲ್ಲೂಕಿಗೆ ಮಿನಿ ವಿಧಾನಸೌಧ ಮಂಜೂರಾತಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ಹಾಗೂ ಯಾವಾಗ ಮಂಜೂರು ಮಾಡಲಾಗುವುದು?

ಶ್ರೀ ಜಿ.ಕರುಣಾಕರ ರೆಡ್ಡಿ (ಕಂದಾಯ ಸಚಿವರು) :

ಅ) ಅನುದಾನ ಲಭ್ಯತೆಗೊಳಪಟ್ಟು ತಾಲ್ಲೂಕು ಮಟ್ಟದಲ್ಲಿ ಮಿನಿ ವಿಧಾನಸೌಧ ನಿರ್ಮಾಣ ಮಾಡಲಾಗುತ್ತದೆ.

ಆ) ಬಂಟ್ವಾಳ ತಾಲ್ಲೂಕು ಕೇಂದ್ರದಲ್ಲಿ ಮಿನಿ ವಿಧಾನಸೌಧ ನಿರ್ಮಿಸುವ ಕಾಮಗಾರಿಯನ್ನು 2009–10ನೇ ಸಾಲಿನಲ್ಲಿ ಒದಗಿಸಿರುವ ಅನುದಾನವು ಮುಂದುವರಿದ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುವುದಿಲ್ಲ. ಈ ಹೊಸ ಕಾಮಗಾರಿಯನ್ನು 2010–11ನೇ ಸಾಲಿನಲ್ಲಿನ ಅನುದಾನದ ಲಭ್ಯತೆಯನ್ನು ಆಧರಿಸಿ ತೆಗೆದುಕೊಳ್ಳಲಾಗುವುದು.

86 ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ) : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಮನಗರ ಜಿಲ್ಲೆಯ ರಾಮನಗರ ಹಾಗೂ ಮಾಗಡಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕೆಐಎಡಿಬಿ ಹಾಗೂ ಕೆ.ಎಸ್.ಎಸ್.ಐ.ಡಿ.ಸಿ. ವತಿಯಿಂದ ಯಾವ ಯಾವ ಜಾಗವನ್ನು ಕೈಗಾರಿಕಾ ಅಭಿವೃದ್ಧಿಪಡಿಸಲು ಗುರುತಿಸಲಾಗಿದೆ (ಪೂರ್ಣ ವಿವರ ನೀಡುವುದು);

ಆ) ಇವುಗಳಲ್ಲಿ ಯಾವ ಯಾವ ಜಾಗಗಳ ಬಗ್ಗೆ ತಕರಾರಿನ ಸ್ವರೂಪವೇನು ಎಂಬುದರ ವಿವರ ನೀಡುವುದು;

ಇ) ಈ ತಕರಾರುಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ಎಂಬುದರ ಸಂಪೂರ್ಣ ವಿವರ ನೀಡುವುದು?

ಶ್ರೀ ಮುರುಗೇಶ್ ಆರ್.ನಿರಾಣಿ (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು) :

ಅ) ರಾಮನಗರ ಜಿಲ್ಲೆಯ ರಾಮನಗರ ಹಾಗೂ ಮಾಗಡಿ ವಿಧಾನ ಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಈ ಕೆಳಕಂಡ ಪ್ರದೇಶಗಳಲ್ಲಿ ಮಂಡಳಿಯಿಂದ ಕೈಗಾರಿಕಾ ಅಭಿವೃದ್ಧಿಪಡಿಸಲು ಜಮೀನನ್ನು ಗುರುತಿಸಿ ಭೂಸ್ವಾಧೀನ ಪಡಿಸಲಾಗಿದೆ.